ಮೈಸೂರು ಡಿಸ್ಟ್ರಿಕ್ಟ್.

ತಾರೀಖು 14ನೇ ಫಿಬ್ರವರಿ 1896.

ಸ್ಥಿರಸ್ವತ್ತಿನ ಹರಾಜ್ ಬಗ್ಗೆ ಕೊಡಲ್ಪಟ್ಟ ಇಸ್ತಿಹಾರ್ ವ ಪ್ರಸಿದ್ಧ ಪತ್ರಿಕೆ.

1. ಕಂದಾಯದ ಬಾಕಿದಾರರಾದ ಜೋಡಿ ಕೈಗೋನಹಳ್ಳಿ ಗ್ರಾಮದ ಸುಬ್ಬಾ ಭಟ್ಟ ವಗ್ಗೆರೇರಿಂದ ಒರಬೇಕಾದ ಜಮ್ಮಿ ಕಂದಾಯದ ಬಾಕಿಗಾಗಿ ಇದರಡಿ ನಮೂದಾಗುವ, ಸ್ಥಿರಸ್ವತ್ತು ಮೈಸೂರ್ ಡಿಸ್ಟ್ರಿಕ್ಟು ಕೃಷ್ಣರಾಜಪೇಟೆ ತಾಲ್ಲೂಕು ಕಚೇರಿಯಲ್ಲಿ 1896ನೇ ಇಸವಿ ಮಾರ್ಚಿ 28ನೇ ತಾರೀಖಿನಲ್ಲಿ ಬಹಿರಂಗವಾದ ಹರಾಜು ಮಾಡಲ್ಪಡುತ್ತೆಂದು ಇದರಿಂದ ಪ್ರಸಿದ್ಧ ಪಡಿಸಲ್ಪಟ್ಟು ಇದೆ.

ಹರಾಜು ಆ ದಿವಸ ದಿವಿ 11 ಘಂಟೆಗೆ ಉಪಕ್ರಮಿಸಲ್ಪಡುತ್ತೆ. ಸ್ವತ್ತು ಏಕದಂ ಚಡದರಖಾಸ್ತುದಾರನ ಹೆಸರಿಗೆ ನಿಲ್ಲಿಸಲ್ಪಡುತ್ತೆ.

2. ಸದರೀ ಸ್ವತ್ತಿಗಾಗಿ ಹರಾಜುದಾರನು 89—90ನೇ ಸಾಲ್ ಲಾಗಾಯತು 1894—95ನೇ ಸಾಲಿಗೆ ಪೂರ್ತಿಯಾಗಿ ಪಾವತಿ ಮಾಡಬೇಕಾದ ಕಂದಾಯದ ಮೊಬಲಗು ಇದರಡಿ ಕಾಣಿಸಿರುವ ತಖ್ತೆಯಲ್ಲಿ ನಮೂದಿಸಿರುವ ತಫ್ಸೀಲ್ ಮೇರಿಗೆ 2,263—10—7 ರೂಪಾಯಿ ಆಗಿರುತ್ತೆ.

3. ಹರಾಜು ಕಾಲದಲ್ಲಿ ಹರಾಜ್‌ದಾರನು ಹರಾಜ್ ಮೊಬಲಗಿನ ಶೇಕಡಾ 25 ರೂಪಾಯಿಗಳನ್ನು ಡಿಪಾಜಿಟ್ ಹಾಜರ್ಮಾಡಬೇಕಾಗಿರುತ್ತೆ. ಅದು ಜಾತಾ ಹರಾಜು ಬಾಬತು ಬಾಕಿ ಮೊಬಲಗು ಹರಾಜು ತಾರೀಖು ಲಾಗಾಯತು 15 ದಿವಸಗಳಲ್ಲಿ ಪಾವತಿ ಮಾಡಲ್ಪಡದೇ ಹೋದಲ್ಲಿ ಮೇಲೆ ಹೇಳಿದ ಡಿಪಾಜಿಟ್ಟು ಮೊಬಲಗನ್ನು ಹಾಜರ್ಕಡಿದವನು ಕಳದುಕೊಳ್ಳಲು ಗುರಿಯಾಗುತ್ತಾನೆ.

4. ಅಂಥಾ ಡಿಪಾಜಿಟ್ ಮೊಬಲಗು ಹಾಜರ್ಮಾಡಲ್ಪಡದೆ ಯಾ ಹರಾಜು ಬಾಬತು ಬಾಕಿ ಮೊಬಲಗು ಪಾವತಿ ಮಾಡಲ್ಪಡದೆ ಹೋದಾಗ್ಯೆ ಸದರೀ ಸ್ವತ್ತು ಮೊದಲು ಹರಾಜುದಾರನ ಖರ್ಚಿನಿಂದಲೂ ಮತ್ತು ಅವನಿಗೆ- ಅದರಿಂದ ಉಂಟಾಗಬಹುದಾದ ನಷ್ಟಕ್ಕೆ ಗುರಿಪಡಿಸಿಯೂ ಪುನಃ ಹರಾಜು ಮಾಡಲ್ಪಡುತ್ತೆ.

5. ಹರಾಜಿನಲ್ಲಿ ಸವಾಲ್ ಮಾಡತಕ್ಕ ಜನಗಳು ಖುದ್ದು ತಮ್ಮ ಸ್ವಂತಕ್ಕೋಸ್ಕರ ಸವಾಲ್ ಮಾಡುತ್ತಾರೆಯೇ ಯಾ ಏಜಂಟು ಯಾ ಮುತಾಲೀಕರಾಗಿ ಸವಾಲ್ ಮಾಡುತ್ತಾರೆಯೇ ಎಂಬ ಅಂಶವನ್ನ ತಿಳಿಸಬೇಕೆಂತಲೂ, ಇತರರಿಗೋಸ್ಕರ ಮುತಾಲೀಕರಾಗಿ ಸವಾಲ್ ಮಾಡುವ ಸಂದರ್ಭದಲ್ಲಿ ಅಂಥಾ ತಮ್ಮ ಯಜಮಾನರಿಂದ ಸಹಿ ಮಾಡಲ್ಪಟ್ಟ ಲಿಖಿತವಾದ ಅಧಿಕಾರ ಪತ್ರಿಕೆಯನ್ನು ಹಾಜರ್ಮಾಡುವಂತೆಯೂ ಕೇಳಲ್ಪಡಬಹುದು. ಅದನ್ನ ಅವರು ಹಾಜರ್ಮಾಡದೆ ಹೋದಲ್ಲಿ ಅವರ ಸವಾಲುಗಳು ತಿರಸ್ಕರಿಸಲ್ಪಡಬಹುದು.

6. ಹರಾಜಿನಲ್ಲಿ ಸ್ವತ್ತು ಯಾರ ಹೆಸರಿಗಾದರೂ ನಿಲ್ಲಿಸಲ್ಪಡುವದಕ್ಕೆ ಮುಂಚಿತವಾಗಿ, ಬಾಕಿದಾರನಾಗಲಿ ಆತನ ತರಫಿನವನಾಗಿ ಪ್ರವರ್ತಿಸುವ ಯಾ ಸದರೀ ಸ್ವತ್ತಿನಲ್ಲಿ ಬಾಧ್ಯತೆ ಇರುತ್ತೆಂದು ಹೇಳುವ ಯಾವ ಇತರ ಮನುಷ್ಯನೇ ಆಗಲಿ ಬಾಕಿಯಲ್ಲಿ ಬಂದಿರುವ ಪೂರಾ ಕಂದಾಯದ ಹಣವನ್ನೂ ಬಡ್ಡಿ ಮತ್ತು ಇತರ ಖರ್ಚುಗಳ ಸಮೇತ ಹಾಜರ್ಮಾಡುವ ಪಕ್ಷಕ್ಕೆ ಹರಾಜು ನಿಲ್ಲಿಸಲ್ಪಡುತ್ತೆ.

7. ಹರಾಜು ಡೆಪ್ಯೂಟಿ ಕಮ್ಮಿಷನರವರಿಂದ ಮಂಜೂರ್ಮಾಡಲ್ಪಡುವ ತನಕ ಸ್ವತ್ತಿನ ಹರಾಜು ಪೂರ್ತಿಯಾಗುವದಿಲ್ಲ.

8. ಹರಾಜಿನಲ್ಲಿ ತೆಗದುಕೊಂಡವರು ಹರಾಜು ಮೊಬಲಗನ್ನು ಪೂರ್ತಿಯಾಗಿ ಪಾವತಿ ಮಾಡಿದ ಮೇಲೆ ಡೆಪ್ಯೂಟಿ ಕಮ್ಮಿಷನರವರಿಂದ ಹರಾಜು ಮಂಜೂರ್ಮಾಡಲ್ಪಟ್ಟ ಕೂಡ್ಲೆ, ಹರಾಜುದಾರನು ಸದರೀ ಸ್ವತ್ತಿನ ಸ್ವಾಧೀನವನ್ನು ಹೊಂದುವರು. ಮತ್ತು ಸದರೀ ಸ್ವತ್ತು ಹರಾಜುದಾರನ ಹೆಸರಿನಲ್ಲಿ ರಿಜಿಸ್ಟರ್ ಮಾಡಲ್ಪಟ್ಟು ಡೆಪ್ಯೂಟಿ ಕಮ್ಮಿಷನರವರಿಂದ ಸೈ ಮೊಹರ್ ಮಾಡಲ್ಪಟ್ಟ ಬಂದು ಹರಾಜು ಸರಟಿಫಿಕೇಟು ಆತನಿಗೆ ಕೊಡಲ್ಪಡುವದು. ಸ್ವತ್ತಿನ ವಿವರಣೆಯಲ್ಲಿಯಾಗಲಿ ಯಾ ವಿನಿರ್ಣಯದಲ್ಲಿಯೂ ಇರುವ ಸ್ಖಲಿತಗಳಿಗೆ ಗವರ್ಮೆಂಟಿನವರು ಜವಾಬ್ದಾರರಲ್ಲವೆಂಬ ಅಂಶವನ್ನು ಸ್ಪಷ್ಟವಾಗಿ ತಿಳಿದಿರತಕ್ಕದ್ದು.

9. ಹರಾಜಿನಿಂದ ತಮಿಗೆ ನಷ್ಟ ಉಂಟಾಯಿತೆಂದು ಎಣಿಸುವ ಜನಗಳು ಹರಾಜ್ ತಾರೀಖು ಲಾಗಾಯತು 30 ದಿವಸಗಳಲ್ಲಿ ಡೆಪ್ಯೂಟಿ ಕಮ್ಮಿಷನರವರಿಗೆ ಅಪ್ಪೀಲ್ ಮಾಡಿಕೊಳ್ಳುವದಕ್ಕೂ ಮತ್ತು ಅವರ ಹುಕುಮಿನ ಮೇಲೆ ಕಾನೂನಿನಿಂದ ವಿಧಿಸಲ್ಪಟ್ಟ ವಾಯಿದೆಯಲ್ಲಿ ಗವರ್ಮೆಂಟಿನವರಿಗೆ ಅಪ್ಪೀಲ್ ಮಾಡಿಕೊಳ್ಳುವದಕ್ಕೂ ಸ್ವತಂತ್ರರಾಗಿರುತ್ತಾರೆ. ಸ್ವತ್ತಿನ ವಿಕ್ರಯವು ಅಂಥಾ ಅಪ್ಪೀಲಿನಲ್ಲಿ ಆಗುವ ಫೈಸಲ್ ಹುಕುಮಿಗೆ ಬದ್ಧವಾಗಿರತಕ್ಕದ್ದು.

2-0

ತಾಲ್ಲೂಕು.	ಹೋಬಳಿ.	ಗ್ರಾಮದ.	ಬಾಕಿದಾರರ ಹೆಸರು.	ಸ್ವತ್ತಿನ ತಪ್ಸೀಲ್. ಕಟ್ಟಡಗಳು. ಕಟ್ಟಡದ ಹೆಸರು.	ಅಂದಾಜು ಕಿಮ್ಮತ್ತು.	ಜಮೀನು. ಸರ್ವೆ ನಂಬರ್ ಅಥವಾ ಜಮೀನಿನ ಹೆಸರು.	ಖುಷ್ಕಿ ತರೀ ಬಾಗಾಯಿತು ಪರಂಪೋಕು	ವಿಸ್ತೀರ್ಣ	ಅಕಾರ.	ಸರಕಾರಕ್ಕೆ ಬರಬೇಕಾದ ನೋಷಿನ ಪೈಸೆ ಬಗ್ಗೆ ಸಂಬಂಧವಾದ ಬಾಕೀ ಜೊಬಲಗು.			
								ಎ. ಗು.	ರೂ. ಆ. ಪೈ.	ರೂ.	ಆ.	ಪೈ.	
1	2	3	4	5	6	7	8	9	10	11			
ಶ್ರೀರಂಗಪಟ್ಟಣ	ಸಂತೆಬಾಚಹಳ್ಳಿ	ಜೋಡಿ ಹೈಗೋನಹಳ್ಳಿ.	ಸುಬ್ಬಾಭಟ್ಟ ವಗೈರೆ ಯಿಸಂ 22 ಜನ		ರೂ. ಆ. ಪೈ. 0	ಸರ್ಕಾರ ಮೈನರ್ ಇನಾಂ ಹೊರಪಡಿಸಿದ ಹೊರಾ ಗ್ರಾಮದನ್ನು	ಖುಷ್ಕಿ	499 24		2263	10	7	ಹರಾಜು ತಾರೀ ಖುವರಿಗೆ ಒಡ್ಡಿ ಬರಬೇಕು.
							ತರೀ	62 38					
							ಬಾಗಾಯಿತು	2 27					
							ಪರಂಪೋಕು	288 7					
							ಸಾಲಿಯಾನಾ ಸರ್ಕಾರಕ್ಕೆ ಬರತಕ್ಕ ಜೋಡಿ	853 16	359				
							ಸೆಸ್		74 12 6				
									433 12 6				

ಸ್ಥಿರಸ್ವತ್ತಿನ ಹರಾಜ್ ಬಗ್ಗೆ ಕೊಡಲ್ಪಟ್ಟ ಇಸ್ತಿಹಾರ್ ವ ಪ್ರಸಿದ್ಧ ಪತ್ರಿಕೆ.

1. ಕಂದಾಯದ ಬಾಕಿದಾರರಾದ ಸರ್ವಮೊನ್ಯ ವಡೆಯಾಂಡಹಳ್ಳಿ, ಬಳ್ಳೇಕೆರೆ ಇನಾಂದಾರ್ ಮೈಸೂರ ವೆಂಕಟಲಕ್ಷ್ಮಮ್ಮ 1 ಹೊಸೂರ ಯಲ್ಲಪ್ಪ 1 ರಂಗಶ್ರೀಧರನರಸಿಂಹಾಚಾರು, 1 ರಂಗರಾಮನರಸಿಂಹಾಚಾರು, ಇವರಿಂದ ಬರಬೇಕಾದ ಜವಿರ್ಾ ಕಂದಾಯದ ಬಾಕಿಗಾಗಿ ಇದರಡಿ ನಮೂದಾಗುವ ಸ್ಥಿರಸ್ವತ್ತು ಮೈಸೂರ ಡಿಸ್ಟ್ರಿಕ್ಟು ಶ್ರೀರಂಗಪಟ್ಟಣ ತಾಲ್ಲೂಕು ವಡೆಯಾಂಡಹಳ್ಳಿ ಗ್ರಾಮದಲ್ಲಿ 1896ನೇ ಮಾರ್ಚಿ 30ನೇ ತಾರೀಖಿನಲ್ಲಿ ಬಹಿರಂಗವಾದ ಹರಾಜು ಮಾಡಲ್ಪಡುತ್ತೆಂದು ಇದರಿಂದ ಪ್ರಸಿದ್ಧ ಪಡಿಸಲ್ಪಟ್ಟಿ ಇದೆ. ಹರಾಜು 11 ಘಂಟೆಗೆ ಉಪಕ್ರಮಿಸಲ್ಪಡುತ್ತೆ. ಸ್ವತ್ತು ಏಕದಂ ಜಡದರಖಾಸ್ತುದಾರನ ಹೆಸರಿಗೆ ನಿಲ್ಲಿಸಲ್ಪಡುತ್ತೆ.

2. ಸದರೀ ಸ್ವತ್ತಿಗಾಗಿ ಹರಾಜುದಾರನು 1895–96ನೇ ಸಾಲಿಗೆ ಪೂರ್ತಿಯಾಗಿ* ಪಾವತಿ ಮಾಡಬೇಕಾದ ಕಂದಾಯದ ಮೊಬಲಗು ಇದರಡಿ ಕಾಣಿಸಿರುವ ತಖ್ತೆಯಲ್ಲಿ ನಮೂದಿಸಿರುವ ತಪ್ಸೀಲ್ ಮೇರಿಗೆ 522–1–1 ರೂಪಾಯಿ ಆಗಿರುತ್ತೆ.

3. ಹರಾಜು ಕಾಲದಲ್ಲಿ ಹರಾಜುದಾರನು ಹರಾಜ್ ಮೊಬಲಗಿನ ಶೇಕಡಾ 25 ರೂಪಾಯಿಯನ್ನು ಡಿಪಾಜಿಟ್ ಹಾಜರ್ಮಾಡಬೇಕಾಗಿರುತ್ತೆ. ಅದು ಜಾತಾ ಹರಾಜ್ ಬಾಬತು ಬಾಕಿ ಮೊಬಲಗು ಹರಾಜು ತಾರೀಖು ಲಾಗಾಯ್ತು 15 ದಿವಸಗಳಲ್ಲಿ ಪಾವತಿ ಮಾಡಲ್ಪಡದೇ ಹೋದಲ್ಲಿ ಮೇಲೆ ಹೇಳಿದ ಡಿಪಾಜಿಟ್ ಮೊಬಲಗನ್ನು ಹಾಜರ್ಮಾಡಿದವನು ಕಳದುಕೊಳ್ಳಲೂ ಗುರಿಯಾಗುತ್ತಾನೆ.

4. ಅಂಥಾ ಡಿಪಾಜಿಟ್ ಮೊಬಲಗು ಹಾಜರ್ಮಾಡಲ್ಪಡದೆ ಯಾ ಹರಾಜು ಬಾಬತು ಬಾಕಿ ಮೊಬಲಗು ಪಾವತಿ ಮಾಡಲ್ಪಡದೆ ಹೋದಾಗ್ಯೆ ಸದರೀ ಸ್ವತ್ತು ಮೊದಲು ಹರಾಜುದಾರನ ಖರ್ಚಿನಿಂದಲೂ, ಮತ್ತು ಅವನಿಗೆ ಅದರಿಂದ ಉಂಟಾಗಬಹುದಾದ ನಷ್ಟಕ್ಕೆ ಗುರಿಪಡಿಸಿಯೂ ಪುನಃ ಹರಾಜು ಮಾಡಲ್ಪಡುತ್ತೆ.

5. ಹರಾಜಿನಲ್ಲಿ ಸವಾಲ್ ಮಾಡತಕ್ಕ ಜನಗಳು ಖುದ್ದು ತಮ್ಮ ಸ್ವಂತಕ್ಕೋಸ್ಕರ ಸವಾಲ್ ಮಾಡುತ್ತಾರೆಯೇ ಯಾ ಏಜಂಟ್ ಯಾ ಮುಖ್ತಾರೀಕರಾಗಿ ಸವಾಲ್ ಮಾಡುತ್ತಾರೆಯೇ ಎಂಬ ಅಂಶವನ್ನು ತಿಳಿಸಬೇಕೆಂತಲೂ, ಇತರರಿಗೋಸ್ಕರ ಮುಖ್ತಾರೀಕರಾಗಿ ಸವಾಲ್ ಮಾಡುವ ಸಂದರ್ಭದಲ್ಲಿ ಆಂಥಾ ತಮ್ಮ ಯಜಮಾನರಿಂದ ಸಹಿ ಮಾಡಲ್ಪಟ್ಟ ಲಿಖಿತವಾದ ಅಧಿಕಾರ ಪತ್ರಿಕೆಯನ್ನು ಹಾಜರ್ಮಾಡುವಂತೆಯೂ ಕೇಳಲ್ಪಡಬಹುದು. ಅದನ್ನು ಅವರು ಹಾಜರ್ಮಾಡದೆ ಹೋದಲ್ಲಿ ಅವರ ಸವಾಲುಗಳು ತಿರಸ್ಕರಿಸಲ್ಪಡಬಹುದು.

6. ಹರಾಜಿನಲ್ಲಿ ಸ್ವತ್ತು ಯಾರ ಹೆಸರಿಗಾದರೂ ನಿಲ್ಲಿಸಲ್ಪಡುವದಕ್ಕೆ ಮುಂಚಿತವಾಗಿ, ಬಾಕಿದಾರನಾಗಲಿ ಅತನ ತರಫಿನವನಾಗಿ ಪ್ರವರ್ತಿಸುವ ಯಾ ಸದರೀ ಸ್ವತ್ತಿನಲ್ಲಿ ಬಾಧ್ಯತೆ ಇರುತ್ತೆಂದು ಹೇಳುವ ಯಾವ

ಇತರ ಮನುಷ್ಯನೇ ಆಗಲಿ ಬಾಕಿಯಲ್ಲಿ ಬಂದಿರುವ ಪೂರಾ ಕಂದಾಯದ ಹಣವನ್ನೂ ಬಡ್ಡಿ ಮತ್ತು ಇತರ ಖರ್ಚುಗಳ ಸಮೇತ ಹಾಜರ್ಮಾಡುವವರೆಗ್ಗೆ ಹರಾಜು ನಿಲ್ಲಿಸಲ್ಪಡುತ್ತೆ.

7. ಹರಾಜು ಡೆಪ್ಯೂಟಿ ಕಮ್ಮಿಷನರವರಿಂದ ಮುಂಜೂರ್ಮಾಡಲ್ಪಡುವ ತನಕ ಸ್ವತ್ತಿನ ಹರಾಜು ಪೂರ್ತಿಯಾಗುವದಿಲ್ಲ.

8. ಹರಾಜಿನಲ್ಲಿ ತೆಗೆದುಕೊಂಡವರು ಹರಾಜ್ ಮೊಬಲಗನ್ನು ಪೂರ್ತಿಯಾಗಿ ಪಾವತಿ ಮಾಡಿದ ಮೇಲೆ ಡೆಪ್ಯೂಟಿ ಕಮ್ಮಿಷನರವರಿಂದ ಹರಾಜು ಮುಂಜೂರ್ಮಾಡಲ್ಪಟ್ಟ ಕೂಡ್ಲೆ, ಹರಾಜುದಾರು, ಸದರೀ ಸ್ವತ್ತಿನ ಸ್ವಾಧೀನವನ್ನು ಹೊಂದುವರು. ಮತ್ತು ಸದರೀ ಸ್ವತ್ತು ಹರಾಜುದಾರನ ಹೆಸರಿನಲ್ಲಿ ರಿಜಿಸ್ಟರ್ ಮಾಡಲ್ಪಟ್ಟು ಡೆಪ್ಯೂಟಿ ಕಮ್ಮಿಷನರವರಿಂದ ಸೈ ಮೊಹರ್ ಮಾಡಲ್ಪಟ್ಟ ಒಂದು ಹರಾಜು ಸರಟಿಫಿಕೇಟ್ ಆತನಿಗೆ ಕೊಡಲ್ಪಡುವದು. ಸ್ವತ್ತಿನ ವಿವರಣೆಯಲ್ಲಿಯೂ ಯಾ ವಿಸ್ತೀರ್ಣದಲ್ಲಿಯೂ ಇರುವ ಸ್ಖಲಿತ್ಯಗಳಿಗೆ ಗವರ್ಮೆಂಟಿನವರು ಜವಾಬ್ದಾರ್ಯಲ್ಲವೆಂಬ ಅಂಶವನ್ನು ಸ್ಪಷ್ಟವಾಗಿ ತಿಳಿದಿರತಕ್ಕದ್ದು.

9. ಹರಾಜಿನಿಂದ ತಮಿಗೆ ನಷ್ಟ ಉಂಟಾಯಿತೆಂದು ಎಣಿಸುವ ಜನಗಳು ಹರಾಜು ತಾರೀಖು ಲಾಗಾಯತು 30 ದಿವಸಗಳಲ್ಲಿ ಡೆಪ್ಯೂಟಿ ಕಮ್ಮಿಷನರವರಿಗೆ ಅಪ್ಪೀಲ್ ಮಾಡಿಕೊಳ್ಳುವದಕ್ಕೂ, ಮತ್ತು ಅವರ ಹುಕುಮಿನ ಮೇಲೆ ಕಾನೂನಿನಿಂದ ವಿಧಿಸಲ್ಪಟ್ಟ ವಾಯಿದೆಯಲ್ಲಿ ಗವರ್ಮೆಂಟಿನವರಿಗೆ ಅಪ್ಪೀಲ್ ಮಾಡಿಕೊಳ್ಳುವದಕ್ಕೂ ಸ್ವತಂತ್ರರಾಗಿರುತ್ತಾರೆ. ಸ್ವತ್ತಿನ ವಿಕ್ರಯವು ಅಂಥಾ ಅಪ್ಪೀಲಿನಲ್ಲಿ ಆಗುವ ಫೈಸಲ್ ಹುಕುಮಿಗೆ ಬದ್ಧವಾಗಿರತಕ್ಕದ್ದು.

ತಾಲ್ಲೂಕು.	ಹೋಬಳಿ.	ಗ್ರಾಮ.	ಬಾಕೀದಾರರ ಹೆಸರು.	ಸ್ವತ್ತಿನ ತಪ್ಸೀಲ್. ಕಟ್ಟಡಗಳು. ಕಟ್ಟಡದ ಹೆಸರು.	ಕಂದಾಯದ ಕಿಮ್ಮತ್ತು.	ಜಮೀನು. ನಂಬರ್ ಅಥವಾ ಜಮೀನಿನ ಹೆಸರು.	ಮುಖ್ತೀಜಿ ಅಥವಾ ಬಾಗಾಯತು.	ವಿಸ್ತೀರ್ಣ.	ಪ್ರಕಾರ.	ಸರ್ಕಾರಕ್ಕೆ ಬರಬೇಕಾದ ಸೋಟಿನ ಪೈಕೆ ಸಹಿತವಾದ ಬಾಕಿ ಹೊಬಲಗು.
1	2	3	4	5	6	7	8	9	10	11
				ರೂ. ಆ. ಪೈ.				ಎ. ಗುಂ.	ರೂ. ಆ. ಪೈ.	ರೂ. ಆ. ಪೈ.
ಶ್ರೀರಂಗಪಟ್ಟಣ.	ಅರಕೆರೆ	ನಜಿಯಂಪಟ್ಟಣ	ಮೈಸೂರ ವೆಂಕಟಲಕ್ಷ್ಮಮ್ಮ 1 ಹೊಸೂರ ಯಲ್ಲಪ್ಪ 1 ರಂಗಶ್ರೀಧರ ನರಸಿಂಹಾಚಾರು 1 ರಂಗರಾಮನರಸಿಂಹಾಚಾರು	14 0 0 141 8 9 204 14 10 89 0 0	ಮೋಜೆ ಪ್ರಕಾರ ಸರಕಾರಕ್ಕೆ ತರೀ ಬರತಕ್ಕದ್ದು ಬಾಗಾಯತು ಲ್ಯಾಂಡ್ ರೆವಿ ಖರಾಬ್ ಆಕಾರ್ಯ್ಯೋ ವಗೈರೆ ರವಗೈರೆಯ ಲೋಕಲ್ ಫಂಡ್ ಇರಿಗೇಷನ್ ಫಂಡ್	ಮುಖ್ತೀ ತರೀ ಬಾಗಾಯತು ಖರಾಬ್ ಆಕಾರ ರ ವಗೈರೆ	.. .. 91 15 9 .. .. 2677 12 1 .. .. 348 12 10	61 4 2
				449—7—7			ಜುಮ್ಲಾ	.. 788 21	3318 8 8	
	ಬಿಳಿಕೆರೆ			68 13 6 3 12 0 72 9 6	ರೈವೈಜ್ ಪ್ರಕಾರ ಪರೀಜ್ ಲೋಕಲ್ ಫಂಡ್ ಇರಿಗೇಷನ್ ಫಂಡ್	ಮುಖ್ತೀ ತರೀ ಬಾಗಾಯತು ಖರಾಬ್ ಆಕಾರ ರ ವಗೈರೆ	1044 36 16 14 18 25	970 4 0 60 0 0 65 0 0 6 4 0	72 9 0
							ಜುಮ್ಲಾ	1079 35	1101 8 0	133 13 8
							ಜಪ್ತೀ ಹರಾಜ್ ಬಡ್ಡಿ ಸಹ	.. ..	.. ..	1 0 0

ಪಿ. ಪಂಚನಾಥರಾವ್,
ಫೈನಾನ್ಷಿಯಲ್ ಸಬ್ ಡಿವಿಜ್ ಆಫಿಸರ್.